# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **302(296)** |
| ಮಾನ್ಯ ಸದಸ್ಯರ ಹೆಸರು | ಶ್ರೀ ಸಿ ಎಂ ಇಬ್ರಾಹಿಂ(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 18.02.2022 |
| ಉತ್ತರಿಸುವ ಸಚಿವರು | ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರದಿಂದ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತಕ್ಕೆ ಸ್ವಯಂ ಉದ್ಯೋಗ ಕೈಗೊಳ್ಳಲು ಯೋಜನೆಗೆ ಬಿಡುಗಡೆಯಾದ ಅನುದಾನವೆಷ್ಟು; ಬಳಕೆಯಾದ ಅನುದಾನವೆಷ್ಟು; ಕಳೆದ ಮೂರು ವರ್ಷಗಳಿಂದ ಸ್ವಯಂ ಉದ್ಯೋಗ ಕೈಗೊಳ್ಳಲು ಸ್ವೀಕೃತವಾದ ಅರ್ಜಿಗಳೆಷ್ಟು; ಅದರಲ್ಲಿನ ಫಲಾನುಭವಿಗಳೆಷ್ಟು; (ವರ್ಷವಾರು ಮತ್ತು ವಿಧಾನ ಸಭಾ ಕ್ಷೇತ್ರವಾರು ಅಂಕಿ ಅಂಶಗಳ ಸಂಪೂರ್ಣ ಮಾಹಿತಿ ಒದಗಿಸುವುದು? | ಸರ್ಕಾರದಿಂದ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತಕ್ಕೆ ಕಳೆದ ಮೂರು ವರ್ಷಗಳಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಯೋಜನೆಗೆ ಬಿಡುಗಡೆಯಾದ ಅನುದಾನ ರೂ.23856.74ಲಕ್ಷಗಳು, ಬಳಕೆಯಾದ ಅನುದಾನ ರೂ.23470.94ಲಕ್ಷಗಳು, ಕಳೆದ ಮೂರು ವರ್ಷಗಳಿಂದ ಸ್ವಯಂ ಉದ್ಯೋಗ ಕೈಗೊಳ್ಳಲು ಸ್ವೀಕೃತ ಅರ್ಜಿಗಳ ಸಂಖ್ಯೆ:2,61,440 ಅದರಲ್ಲಿ ಫಲಾನುಭವಿಗಳ ಸಂಖ್ಯೆ-65,273.<br><br>2018-19 ಮತ್ತು 2019-20ನೇ ಸಾಲಿನಲ್ಲಿ ಒದಗಿಸಿದ ಅನುದಾನದಲ್ಲಿ ವಿಧಾನಸಭಾ ಕ್ಷೇತ್ರವಾರು ಸೌಲಭ್ಯ ಒದಗಿಸಲಾಗಿದೆ. ವರ್ಷವಾರು ಮತ್ತು ವಿಧಾನಸಭಾ ಕ್ಷೇತ್ರವಾರು ಅಂಕಿಅಂಶಗಳ ಸಂಪೂರ್ಣ ಮಾಹಿತಿ ನಿಗಮದ ಜಾಲತಾಣ http://dbcdc.karnataka.gov.in ರಲ್ಲಿ ನೀಡಲಾಗಿದೆ.<br><br>2020-21ನೇ ಸಾಲಿನ ಅಯವ್ಯಯ ಭಾಷಣದ ಘೋಷಣೆ ಅನುಷ್ಠಾನಕ್ಕೆ ನಿರುದ್ಯೋಗಿ ಯುವಕರಿಗೆ ಇ-ವಾಣಿಜ್ಯ ಸಂಸ್ಥೆಗಳ ಉತ್ಪನ್ನಗಳನ್ನು ತಲುಪಿಸಲು ಬೈಕ್ ಖರೀದಿ ಯೋಜನೆಯನ್ನು ಜಿಲ್ಲಾವಾರು ಅನುಷ್ಠಾನಗೊಳಿಸಲಾಗಿರುತ್ತದೆ. ಜಿಲ್ಲಾವಾರು ಮಾಹಿತಿಯನ್ನು **ಅನುಬಂಧ** ದಲ್ಲಿ ನೀಡಲಾಗಿದೆ. |

**ಸಂಖ್ಯೆ: ಹಿಂವಕ 97 ಬಿಎಂಎಸ್ 2022**

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು